**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 369/2022</u>**

**ಚಾ.ಸಾ-2**

**ಪ್ರಾ.ಸಾ-1**

**ಸಾಕ್ಷಿಗೆ ದಿನಾಂಕ 07-08-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮಹೇಶ |
| ತಂದೆಯ ಹೆಸರು | ಃ | ಸಂಗಪ್ಪ |
| ವಯಸ್ಸು | ಃ | 28 ವರ್ಷ |
| ಉದ್ಯೋಗ | ಃ | ವಿದ್ಯಾರ್ಥಿ |
| ವಾಸಸ್ಥಳ | ಃ | ಜೇವರ್ಗಿ |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ಚಾಸಾ-1 ಗೊತ್ತಿಲ್ಲ ಮತ್ತು ಚಾಸಾ-3 ನನಗೆ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನ ಮತ್ತು ಚಾಸಾ-3ರವರ ಸಮಕ್ಷಮ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ಮದ್ಯದ ವಸ್ತುಗಳನ್ನು ಜಪ್ತಿಪಡಿಸಿಕೊಂಡಿಲ್ಲ.

ಸಾಕ್ಷಿಗೆ ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಜಪ್ತಿ ಪಂಚನಾಮೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ನಿಪಿ-1 ಜಪ್ತಿ ಪಂಚನಾಮೆಯಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 08-03-2022ರಂದು ಮಧ್ಯರಾತ್ರಿ 02-00 ರಿಂದ 03-00 ಗಂಟೆ ಸಮಯದಲ್ಲಿ ನಿಮ್ಮ ಮತ್ತು ಚಾಸಾ-3 ರವರ ಸಮಕ್ಷಮ ಪಂಚನಾಮೆಯನ್ನು ಮಾಡಿ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ವಿಸ್ಕಿಯ 48 ಪೌಚುಗಳನ್ನು, 180 ಎಂ.ಎಲ್.ನ ಓರಿಜಿನಲ್ ಚಾಯ್ಸ್ ವಿಸ್ಕಿಯ ಪೌಚುಗಳು, ಹಾಗೂ 90 ಎಂ.ಎಲ್.ನ ಬ್ಯಾಗ್ ಪೈಪರ್ ವಿಸ್ಕಿಯ 52 ಪೌಚುಗಳು, 180 ಎಂ.ಎಲ್.ನ ಬ್ಯಾಗ್ ಪೈಪರ್ ವಿಸ್ಕಿಯ 30 ಪೌಚುಗಳು, 180 ಎಂ.ಎಲ್.ನ ಎಂ.ಸಿ. ಕೊಡೇಸ್ ರಮ್ ನ 40 ಪೌಚುಗಳು, 180 ಎಂ.ಎಲ್.ನ ಕೊಡೇಸ್ ವಿಸ್ಕಿಯ 40 ಪೌಚುಗಳು, 500 ಎಂ.ಎಲ್. ಕಿಂಗ್ ಫಿಷರ್ ಬಿಯರ್ ನ 20 ಬಾಟಲಿಗಳನ್ನು ನಿಮ್ಮ ಸಮಕ್ಷಮ ಜಪ್ತಿಪಡಿಸಿಕೊಂಡು ನಿಪಿ-1 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಮ್ಮ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಮಾಡಿ ಮುದ್ದೆಮಾಲುಗಳನ್ನು ಜಪ್ತಿಪಡಿಸಿಕೊಂಡಿದ್ದರೂ ಸಹ ಗೊತ್ತಿಲ್ಲ ಎಂದು ಹಾಗೂ ಆರೋಪಿಗೆ ಸಹಾಯ ಮಾಡಲೆಂದು ಈ ರೀತಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ಪರ ವಕೀಲರಿಂದ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ.**

**<u>ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 369/2022</u>**

**ಚಾ.ಸಾ-3**

**ಪ್ರಾ.ಸಾ-2**

**ಸಾಕ್ಷಿಗೆ ದಿನಾಂಕ 07-08-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮಲ್ಲಿಕಾರ್ಜುನ |
| ತಂದೆಯ ಹೆಸರು | ಃ | ನಾಗೇಂದ್ರ |
| ವಯಸ್ಸು | ಃ | 29 ವರ್ಷ |
| ಉದ್ಯೋಗ | ಃ | ವಿದ್ಯಾರ್ಥಿ |
| ವಾಸಸ್ಥಳ | ಃ | ಜೇವರ್ಗಿ |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ಚಾಸಾ-1 ಗೊತ್ತಿಲ್ಲ ಮತ್ತು ಚಾಸಾ-2 ನನಗೆ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನ ಮತ್ತು ಚಾಸಾ-2ರವರ ಸಮಕ್ಷಮ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ಮದ್ಯದ ವಸ್ತುಗಳನ್ನು ಜಪ್ತಿಪಡಿಸಿಕೊಂಡಿಲ್ಲ.

ಸಾಕ್ಷಿಗೆ ನಿಪಿ-1 ಜಪ್ತಿ ಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-1 ಜಪ್ತಿ ಪಂಚನಾಮೆಯಲ್ಲಿ ಬರೆದಿರುವ ವಿಚಾರ ಗೊತ್ತಿಲ್ಲ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ದಿಃ 08-03-2022ರಂದು ಮಧ್ಯರಾತ್ರಿ 02-00 ರಿಂದ 03-00 ಗಂಟೆ ಸಮಯದಲ್ಲಿ ನಿಮ್ಮ ಮತ್ತು ಚಾಸಾ-2ರವರ ಸಮಕ್ಷಮ ಪಂಚನಾಮೆಯನ್ನು ಮಾಡಿ 90 ಎಂ.ಎಲ್.ನ ಓರಿಜಿನಲ್ ಚಾಯ್ಸ್ ವಿಸ್ಕಿಯ 48 ಪೌಚುಗಳನ್ನು, 180 ಎಂ.ಎಲ್.ನ ಓರಿಜಿನಲ್ ಚಾಯ್ಸ್ ವಿಸ್ಕಿಯ ಪೌಚುಗಳು, 90 ಎಂ.ಎಲ್.ನ ಬ್ಯಾಗ್ ಪೈಪರ್ ವಿಸ್ಕಿಯ 52 ಪೌಚುಗಳು, 180 ಎಂ.ಎಲ್.ನ ಬ್ಯಾಗ್ ಪೈಪರ್ ವಿಸ್ಕಿಯ 30 ಪೌಚುಗಳು, 180 ಎಂ.ಎಲ್.ನ ಎಂ.ಸಿ. ಕೊಡೇಸ್ ರಮ್ ನ 40 ಪೌಚುಗಳು, 180 ಎಂ.ಎಲ್.ನ ಕೊಡೇಸ್ ವಿಸ್ಕಿಯ 40 ಪೌಚುಗಳು, 500 ಎಂ.ಎಲ್.ನ ಕಿಂಗ್ ಫಿಷರ್ ಬಿಯರ್ ನ 20 ಬಾಟಲಿಗಳನ್ನು ನಿಮ್ಮ ಸಮಕ್ಷಮ ಜಪ್ತಿಪಡಿಸಿಕೊಂಡು ನಿಪಿ-1 ರಂತೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಮ್ಮ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಮಾಡಿ ಮುದ್ದೆಮಾಲುಗಳನ್ನು ಜಪ್ತಿಪಡಿಸಿಕೊಂಡಿದ್ದರೂ ಸಹ ಗೊತ್ತಿಲ್ಲ ಎಂದು ಹಾಗೂ ಆರೋಪಿಗೆ ಸಹಾಯ ಮಾಡಲೆಂದು ಈ ರೀತಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಆರೋಪಿತರ ಪರ ವಕೀಲರಿಂದ ಪಾಟೀ ಸವಾಲು ಇರುವುದಿಲ್ಲ.**

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ